# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **1095** |
| ಮಾನ್ಯ ಸದಸ್ಯರ ಹೆಸರು | **ಶ್ರೀ ಅರವಿಂದ ಕುಮಾರ್ ಅರಳಿ** |
| ಉತ್ತರಿಸುವ ಸಚಿವರು | **ಉನ್ನತ ಶಿಕ್ಷಣ ಸಚಿವರು** |
| ಉತ್ತರಿಸಬೇಕಾದ ದಿನಾಂಕ | **20.12.2018** |

| | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್ ಜಿಲ್ಲೆಯಲ್ಲಿ ಬೀದರ್‌ಗೆ ಮಂಜೂರಾದ ಬೀದರ್ ತಾಂತ್ರಿಕ ಮಹಾವಿದ್ಯಾಲಯ ನಿರ್ಮಾಣದ ಟೆಂಡರ್ ಪ್ರಕ್ರಿಯೆ ಮುಗಿದಿದೆಯೇ; ಮುಗಿದಿದ್ದಲ್ಲಿ ಮುಕ್ತಾಯಗೊಂಡಿದ್ದು ಯಾವಾಗ; ಟೆಂಡರ್ ಮುಗಿಯದಿದ್ದಲ್ಲಿ ಇಲ್ಲಿಯವರೆಗೆ ಆದ ಕಟ್ಟಡದ ಕೆಲಸ ಯಾವ ಹಂತದಲ್ಲಿದೆ; | ಸರ್ಕಾರಿ ಇಂಜಿನೀಯರಿಂಗ್ ಕಾಲೇಜು, ಬೀದರ್ ಸಂಸ್ಥೆಯ ಮುಖ್ಯ ಕಟ್ಟಡ ನಿರ್ಮಾಣ ಕಾಮಗಾರಿಗೆ ದಿನಾಂಕ: 23-10-2017ರಂದು ಟೆಂಡರ್ ಪ್ರಕ್ರಿಯೆ ಪ್ರಾರಂಭಗೊಂಡಿದ್ದು, ದಿನಾಂಕ: 23-02-2018ರಂದು ಟೆಂಡರ್ ಪ್ರಕ್ರಿಯೆ ಮುಕ್ತಾಯಗೊಂಡಿರುತ್ತದೆ. ದಿನಾಂಕ: 12-03-2018ರಂದು ಟೆಂಡರ್ ಅವಾರ್ಡ್ ಆಗಿರುತ್ತದೆ. ಸದರಿ ಕಾಮಗಾರಿಯು ಪ್ರಸ್ತುತ Footing Concrete in Progress, 90% Completed. Column upto plinth level 40% Completed ಹಂತದ ಕಾಮಗಾರಿಯು ಪ್ರಗತಿಯಲ್ಲಿದೆ. |
| (ಆ) | 2010-11ನೇ ಸಾಲಿನಲ್ಲಿ ಕೇಂದ್ರದಿಂದ ಮೌಲಾನಾ ಅಬ್ದುಲ್ ಕಲಾಮ್ ಅಜಾದ್ ಉರ್ದು ಸರ್ಕಿಟ್ ವಿಶ್ವವಿದ್ಯಾಲಯ ಬೀದರ್ ಜಿಲ್ಲೆಗೆ ಮಂಜೂರಾದರೂ ಇಲ್ಲಿವರೆಗೆ ಆರಂಭವಾಗದಿರಲು ಕಾರಣವೇನು; | ಮೌಲಾನಾ ಅಜಾದ್ ರಾಷ್ಟ್ರೀಯ ಉರ್ದು ವಿಶ್ವವಿದ್ಯಾಲಯವು ಭಾರತ ಸರ್ಕಾರದ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯದ ಅಧೀನದ ಕೇಂದ್ರೀಯ ವಿಶ್ವವಿದ್ಯಾಲಯವಾಗಿದ್ದು, ಸದರಿ ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರವನ್ನು ಬೀದರ್‌ನಲ್ಲಿ ಸ್ಥಾಪಿಸುವ ಪ್ರಸ್ತಾವನೆಯು ಕೇಂದ್ರ ಸರ್ಕಾರದ್ದಾಗಿರುತ್ತದೆ.<br><br>ಬೀದರ್‌ನಲ್ಲಿ ಹೈದರಾಬಾದಿನ ಮೌಲಾನಾ ಅಜಾದ್ ರಾಷ್ಟ್ರೀಯ ಉರ್ದು ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರವನ್ನು ಸ್ಥಾಪಿಸಲು ದಿನಾಂಕ: 30-11-2013ರಂದು ಶಂಕುಸ್ಥಾಪನೆ ನೆರವೇರಿಸಲಾಗಿದೆ ಹಾಗೂ ಬೀದರ್‌ನಲ್ಲಿ ಕಾಲೇಜ್ ಆಫ್ ಟೀಚರ್ ಎಜುಕೇಷನ್ (ಸಿ.ಟಿ.ಇ.) ಅನ್ನು ಬೋಧಕ ಮತ್ತು ಬೋಧಕೇತರ ಹುದ್ದೆಗಳೊಂದಿಗೆ ಬಾಡಿಗೆ ಕಟ್ಟಡದಲ್ಲಿ ದಿನಾಂಕ: 13-05-2015ರಿಂದ ಪ್ರಾರಂಭಿಸಲಾಗಿದೆ. ಪ್ರಸ್ತುತ, ಸದರಿ ವಿಭಾಗದಲ್ಲಿ ಎರಡು ಸೆಮಿಸ್ಟರ್‌ಗಳನ್ನು ಒಳಗೊಂಡಂತೆ ಒಟ್ಟು 71 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. |
| (ಇ) | ಈ ವಿಶ್ವವಿದ್ಯಾಲಯ ನಿರ್ಮಾಣಕ್ಕೆ ಸರ್ಕಾರದಿಂದ ಎಷ್ಟು ಎಕರೆ ಜಮೀನು ಮಂಜೂರು ಮಾಡಲಾಗಿದೆ; ಮಾಡದಿರುವುದಕ್ಕೆ ಕಾರಣವೇನು; ಯಾವಾಗ ಮಂಜೂರು ಮಾಡಲಾಗುವುದು? | ಬೀದರ್ ಜಿಲ್ಲೆ, ಬೀದರ್ ತಾಲ್ಲೂಕು, ಗೋರನಳ್ಳಿ (ಬಿ) ಗ್ರಾಮದ ಸ.ನಂ.15/ಪಿ-1ರಲ್ಲಿ 9-33 ಎಕರೆ ಜಮೀನನ್ನು ಮೌಲಾನಾ ಅಜಾದ್ ರಾಷ್ಟ್ರೀಯ ಉರ್ದು ವಿಶ್ವವಿದ್ಯಾಲಯ ಸೆಟ್‌ಲೈಟ್ ಸೆಂಟರ್ ನಿರ್ಮಾಣಕ್ಕಾಗಿ ಮಂಜೂರು ಮಾಡುವ ಕುರಿತು ಪ್ರಾದೇಶಿಕ ಆಯುಕ್ತರು, ಕಲಬುರಗಿ ಇವರಿಂದ ಪ್ರಸ್ತಾವನೆ ಸ್ವೀಕೃತವಾಗಿದ್ದು, ಸದರಿ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. |

ಸಂಖ್ಯೆ: ಇಡಿ 442 ಯುಎನ್‌ಇ 2018

(ಜಿ.ಟಿ. ದೇವೇಗೌಡ)
ಉನ್ನತ ಶಿಕ್ಷಣ ಸಚಿವರು.